# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:101 RNI NO.KAR KAN/2003/10452:No./PMG/KA/NK/BM/743/24-26 ಬುಧವಾರ ದಿನಾಂಕ: 13-03-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಹರಿಯಾಣ ಸಿಎಂ ಮನೋಹರ್ ಲಾಲ್ ಖಟ್ಟರ್ ರಾಜೀನಾಮೆ

ನವದೆಹಲಿ,ಮಾ.12– ರಾಜ್ಯಪಾಲ ಬಂಡಾರು ದತ್ತಾರೇಯ ಅವರನ್ನು ಭೇಟಿಯಾದ ಬಳಿಕ ಹರಿಯಾಣ ಮುಖ್ಯಮಂತ್ರಿ ಮನೋಹರ್ ಲಾಲ್ ಖಟ್ಟರ್ ಇಂದು ಬೆಳಗ್ಗೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಖಟ್ಟರ್ ಅವರ ರಾಜೀನಾಮೆ ನೀಡಿದ ತಕ್ಷಣವೇ ಇಡೀ ಕ್ಯಾಬಿನೆಟ್ 2024 ರ ಲೋಕಸಭೆ ಚುನಾವಣೆಗೆ ಸೀಟು ಹಂಚಿಕೆ ಒಪ್ಪಂದಗಳ ಬಗ್ಗೆ ಆಡಳಿತ ಮೈತ್ರಿಕೂಟದಲ್ಲಿ ವಿಭಜನೆಯ ಊಹಾಪೋಹಗಳು ಕೇಳಿ ಬಂದಿವೆ. ಅಚ್ಚರಿಯ ನಡೆಯಲ್ಲಿ ಬಿಜೆಪಿಯು ಹಿರಿಯು ನಾಯಕ ಕರ್ನಾಲ್ನಿಂದ ಸ್ಪರ್ಧಿಸಬಹುದು ಎಂದು ಮೂಲಗಳು ತಿಳಿಸಿವೆ.40 ಸ್ಥಾನಗಳೊಂದಿಗೆ 90 ಸದಸ್ಯ ಬಲದ ವಿಧಾನ ಸಭೆಯಲ್ಲಿ ಏಕೈಕ ದೊಡ್ಡ ಪಕ್ಷವಾಗಿರುವ ಬಿಜೆಪಿ ಸ್ವತಂತ್ರ ಶಾಸಕರ ಬೆಂಬಲದೊಂದಿಗೆ ಸರ್ಕಾರ ರಚಿಸುವ ವಿಶ್ವಾಸದಲ್ಲಿದೆ ಎಂದು ಮೂಲಗಳು ತಿಳಿಸಿವೆ. ದುಶ್ಯಂತ್ ಚೌತಾಲಾ ಅವರ ಜೆಜೆಪಿ ಜೊತೆ ಚುನಾವಣೋತ್ತರ ಮೈತ್ರಿ ಮಾಡಿಕೊಂಡ ನಂತರ ಇಲ್ಲಿಯವರೆಗೆ ಬಿಜೆಪಿ ಆಡಳಿತ ನಡೆಸುತ್ತಿತ್ತು.

## ಜಿಲ್ಲಾ ಉಸ್ತುವಾರಿ ಸಚಿವರಿಂದ ಕಾಂಕ್ರೀಟ್ ರಸ್ತೆ ಲೋಕಾರ್ಪಣೆ

ಗದಗ ಮಾರ್ಚ 12: ಜಿಲ್ಲಾ ಪಂಚಾಯತ, ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯಿಂದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದ ಕಾಂಕ್ರೀಟ್ ರಸ್ತೆಯನ್ನು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಮಂಗಳವಾರ ಲೋಕಾರ್ಪಣೆಗೊಳಿಸಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಶಾಸಕ ಡಿ.ಆರ್ .ಪಾಟೀಲ, ವಿಶ್ವವಿದ್ಯಾಲಯದ ಕುಲಪತಿ ಗಳಾದ ವಿಷ್ಣುಕಾಂತ ಚಟಪಲ್ಲಿ, ವಿತ್ತಾಧಿಕಾರಿ ಪ್ರಶಾಂತ ಜೆ.ಸಿ, ಕುಲಸಚಿವರಾದ ಡಾ. ಸುರೇಶ ನಾಡಗೌಡರ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ, ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಹೋಬಳಿ ಮಟ್ಟದ ಗ್ಯಾರಂಟಿ ಯೋಜನೆಗಳ ಸಮಾವೇಶ ಸಮಾರಂಭ

# ರಾಜ್ಯಾದ್ಯಂತ ಪಂಚ ಗ್ಯಾರಂಟಿಗಳ ಸಮರ್ಪಕ ಅನುಷ್ಠಾನ: ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ,ಮಾ.12 : ರಾಜ್ಯ ಸರ್ಕಾರ ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ದೇಶಕ್ಕೆ ಮಾದರಿ ರಾಜ್ಯವಾಗಿದೆ. ರಾಜ್ಯಾದ್ಯಂತ ಗ್ಯಾರಂಟಿ ಯೋಜನೆಗಳ ಸಮಾವೇಶ ನಡೆಸಲಾಗುತ್ತಿದೆ. ರಾಜ್ಯದಲ್ಲಿ ಚುನಾವಣೆಯ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಲಾಗಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ಬೆಳಗಾವಿ, ಹುಕ್ಕೇರಿ ತಾಲೂಕ ಆಡಳಿತ, ತಾಲೂಕ ಪಂಚಾಯತ ಮತ್ತು ಬೆಳಗಾವಿ ಹಾಗೂ ಹುಕ್ಕೇರಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಭೂತರಾಮನಟ್ಟಿಯ ಮುಕ್ತಿಮಠದಲ್ಲಿ ಮಂಗಳವಾರ (ಮಾ.12) ನಡೆದ ಕರ್ನಾಟಕ ಸರ್ಕಾರದ ಗ್ಯಾರೆಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿರುವ ಕುರಿತು ಹೋಬಳಿ ಮಟ್ಟದ ಗ್ಯಾರಂಟಿ ಯೋಜನೆಗಳ ಸಮಾವೇಶ ಸಮಾರಂಭದಲ್ಲಿ ಅವರು ಮಾತನಾಡಿದರು. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಜ್ಯೋತಿ ಯೋಜನೆಯಡಿ ಪ್ರತಿ ತಿಂಗಳು 200 ಯೂನಿಟ್ ಉಚಿತ ವಿದ್ಯುತ್, ಯುವನಿಧಿ ಯೋಜನೆಯಡಿ ಪದವಿಧರಿಗೆ ಪ್ರತಿ ತಿಂಗಳು 3 ಸಾವಿರ ರೂಪಾಯಿ ನಿರುದ್ಯೋಗ ಭತ್ಯೆ, ಡಿಪ್ಲೋಮಾ ಪದವಿದರಿಗೆ 1500 ರೂಪಾಯಿ ನೀಡಲಾಗುತ್ತಿದೆ. ಅದೇ ರೀತಿಯಲ್ಲಿ ಅನ್ನಭಾಗ್ಯ ಯೋಜನೆ ಯೋಜನೆಯಡಿ ಪ್ರತಿ ಮಾಹೆ 5 ಕೆ.ಜಿ ಅಕ್ಕಿ ಹಾಗೂ 5 ಕೆಜಿ ಅಕ್ಕಿ ಬದಲಿಗೆ ಡಿಬಿಟಿ ಮೂಲಕ ಹಣ ಜಮೆ, ಗೃಹ ಲಕ್ಷ್ಮೀ ಯೋಜನೆ ಮೂಲಕ ಪ್ರತಿ ಮನೆಯ ಯಜಮಾನಿಯರಿಗೆ ಪ್ರತಿ ತಿಂಗಳು 2 ಸಾವಿರ ಹಾಗೂ ಶಕ್ತಿ ಯೋಜನೆಯಡಿ ರಾಜ್ಯದ ಎಲ್ಲ ಮಹಿಳೆ ಯರಿಗೆ ರಾಜ್ಯಾದ್ಯಂತ ಉಚಿತ ಬಸ್ ಪ್ರಯಾಣಕ್ಕೆ ಅವಕಾಶ ಕಲ್ಪಿಸಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಸಾರ್ವಜನಿಕ ಸೌಲಭ್ಯಗಳನ್ನು ಒದಗಿಸುವಂತ್ತೆ ಸರ್ಕಾರ ಒತ್ತು ನೀಡುತ್ತಿದೆ (2 ನೇ ಪುಟಕ್ಕೆ)

## ಇ.ಎಸ್.ಐ/ಇ.ಪಿ.ಎಫ್ ನಿಯಮಾನುಸಾರ ಪಾವತಿಯಾಗಲಿ: ಜಿಪಂ ಸಿಇಒ ರಾಹುಲ್ ಶಿಂಧೆ

ಬೆಳಗಾವಿ,ಮಾ.12 : ಹೊರಗುತ್ತಿಗೆ ನೌಕರರನ್ನು ಗೌರವದಿಂದ ನಡೆಸಿಕೊಂಡು ಕೆಲಸ ತೆಗೆದುಕೊಳ್ಳಬೇಕು. ಸುಮ್ಮನೆ ಕಿರುಕುಳ ನೀಡದೇ ಪ್ರತಿ ತಿಂಗಳು ವೇತನ ಪಾವತಿ ಮಾಡಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ನಗರದ ಹಳೆ ಜಿಪಂ ಸಭಾಭವನದಲ್ಲಿ (ಮಾ.12) ಮಂಗಳವಾರ ರಂದು ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯೂಮೆಂಟ್ ಯೋಜನೆಗೆ ಸಂಬಂಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಹೊಸದಾಗಿ ಮಾನವ ಸಂಪನ್ಮೂಲ ಏಜೆನ್ಸಿಗಳನ್ನು ಟೆಂಡರ್ ಕರೆದಾಗ ಹಿಂದೆ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಗಣನೆಗೆ ತೆಗೆದುಕೊಳ್ಳಬೇಕು. ಹೊರಗುತ್ತಿಗೆ ಯಾವುದೇ ಸಿಬ್ಬಂದಿಯನ್ನು ತೆಗೆದು ಹಾಕಲು ಏಜೆನ್ಸಿಗಳಿಗೆ ಅವಕಾಶ ನೀಡಬಾರದು. ಏಜೆನ್ಸಿಗಳು ನಿಯಮಾನುಸಾರ ಎಸ್.ಐ/ಇ.ಪಿ.ಎಫ್ ಪಾವತಿಸಿ ರುವುದನ್ನು ಪರಿಶೀಲಿಸಬೇಕು. ಯಾವುದೇ ಏಜೆನ್ಸಿಗಳು ನಿಯಮ ಮೀರಿದ್ದಲ್ಲಿ ಅಂತಹ ಏಜೆನ್ಸಗಳನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮವಹಿಸುವಂತೆ ಸೂಚಿಸಿದರು.

ಬೆಳಗಾವಿ ವಿಭಾಗದ 4, ಚಿಕ್ಕೋಡಿ ವಿಭಾಗದ 3 ಆಯುಷ್ ಆಸ್ಪತ್ರೆ ಹಾಗೂ ಔಶಧಾಲಯಗಳ ಕಟ್ಟಡಗಳು ಪೂರ್ಣಗೊಂಡಿದ್ದು, ಅದರ ವೆಚ್ಚವನ್ನು ಸಂಬಂಧಿಸಿದ ಅಧಿಕಾರಿಗಳು ಭರಿಸಬೇಕು. ಸರಕಾರಿ ಆಸ್ಪತ್ರೆ ಹಾಗೂ ಆಯುಷ್ ಇಲಾಖೆಗಳ ಮೆಡಿಸಿನ್ ಗಳ ಕುರಿತು ಕಡ್ಡಾಯವಾಗಿ ಸ್ಟಾಕ್, ಸ್ವೀಕೃತಿ ಮತ್ತು ಸರಬರಾಜಿನ ಬಗ್ಗೆ ರಜಿಸ್ಟರ್ ನಿರ್ವಹಿಸಬೇಕು ಎಂದು ತಿಳಿಸಿದರು. ಆರ್ಥಿಕ ವರ್ಷ ಮುಕ್ತಾಯ ಹಂತದಲ್ಲಿದ್ದು, ಜಿಪಂ ಲಿಂಕ್ ಡಾಕ್ಯುಮೆಂಟ್ ಯೋಜನೆಗಳಿಗೆ ಸಂಬಂಧಿಸಿದ ಹಣವನ್ನು ಲ್ಯಾಪ್ಸ್ ಆಗದಂತೆ ಕ್ರಮವಹಿಸಬೇಕು.ಒಂದು ವೇಳೆ ಖರ್ಚು ಭರಿಸದೇ ಉಳಿದಿರುವ ಹಣವನ್ನು ಸರಕಾರಕ್ಕೆ ಸರೆಂಡರ್ ಮಾಡಲು ಕ್ರಮ ವಹಿಸಬೇಕು. ಯಾವುದೇ ಸಮಸ್ಯೆಗಳು ಇದ್ದರೆ ನೇರವಾಗಿ ಜಿಲ್ಲಾ ಪಂಚಾಯತಿಯ ಗಮನಕ್ಕೆ ತರುವಂತೆ ಜಿ.ಪಂ. ಸಿ.ಇ.ಓ ರಾಹುಲ ಶಿಂಧೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ (ಅಭಿವೃದ್ಧಿ) ಬಸವರಾಜ ಅಡವಿಮಠ ಯೋಜನಾ ನಿರ್ದೇಶಕರು ಗಂಗಾಧರ ದಿವಟರ್,ಮುಖ್ಯ ಲೆಕ್ಕಾಧಿಕಾ ರಿಗಳು ಪರಶುರಾಮ ದುಡಗುಂಟಿ, ಕೃಷಿ ಇಲಾಖೆ ಜಂಟಿ ನಿರ್ದೇಶಕರು ಶಿವನಗೌಡ ಎಸ್ ಪಾಟೀಲ, ಎಇಇ ಆನಂದ ಎಸ್ ಬಣಗಾರ, ಎಇಇ ಬಸವರಾಜ ಕತ್ತಿ, ಪಶು ಸಂಗೋಪನಾ ಇಲಾಖೆ ಉಪ ನಿರ್ದೇಶಕರು ರಾಜೀವ್ ಎಸ್ ಕುಲೇರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಹೇಶ್ ಕೋಣಿ, ಜಿಲ್ಲಾ ಆಯುಷ್ ಅಧಿಕಾರಿ ಶ್ರೀಕಾಂತ ಭೀ, ಸುಣಧೋಳಿ, ಜಿಲ್ಲಾ ಪರಿಶಿಷ್ಟ ವರ್ಗ ಗಳ ಕಲ್ಯಾ ಣ ಅಧಿಕಾರಿ ಬಸವರಾಜ್ ವಾಯ್ ಕುರಿ ಹುಲಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿ ಕಾರಿ ಶಿವಪ್ರಿಯಾ ಕಡೆಂಚೂರ ಮೊದಲಾದವರು ಉಪಸ್ಥಿತರಿದ್ದರು.

## ಶ್ರೀ ಕೆ.ಎಚ್.ಪಾಟೀಲ ಐ.ಟಿ.ಐ ಕಾಲೇಜ ಎಂದು ನಾಮಕರಣ ಮಾಡಿದ ಸಚಿವ ಎಚ್.ಕೆ.ಪಾಟೀಲ



ಗದಗ ಮಾರ್ಚ 12: ನಗರದ ಬೆಟಗೇರಿಯ ಕಣಗಿನಹಾಳ ರಸ್ತೆಯಲ್ಲಿರುವ ಐಟಿಐ ಮಹಿಳಾ ಕಾಲೇಜಿಗೆ ಶ್ರೀ ಕೆ.ಎಚ್.ಪಾಟೀಲ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ( ಮಹಿಳಾ) ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ನಾಮಕರಣ ಮಾಡಿದರು.ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ , ಐಟಿಐ ಕಾಲೇಜ ಗದಗ ಬೆಟಗೇರಿ ಸಂಯುಕ್ತ ಆಶ್ರಯದಲ್ಲಿ ಬೆಟಗೇರಿಯ ಕಣಗಿನಹಾಳ ರಸ್ತೆಯಲ್ಲಿರುವ ಐಟಿಐ ಕಾಲೇಜಿನಲ್ಲಿ ನಡೆದ ನಾಮಕರಣದ ಉದ್ಘಾಟನಾ ಸಮಾರಂಭ ನೆರವೇರಿಸಿ ಮಾತನಾಡಿದರು (2 ನೇ ಪುಟಕ್ಕೆ)

## ಪ್ರಧಾನಿಮಂತ್ರಿಗಳಾದ ನರೇಂದ್ರ ಮೋದಿ ಅವರಿಂದ "ಒಂದು ನಿಲ್ದಾಣ, ಒಂದು ಉತ್ಪನ್ನ" ಮಳಿಗೆಗೆ ಚಾಲನೆ



ಬಳ್ಳಾರಿ,ಮಾ.12ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಅವರು , ಬಳ್ಳಾರಿ ರೈಲ್ವೇ ನಿಲ್ದಾಣದಲ್ಲಿನ ನೂತನ "ಒಂದು ನಿಲ್ದಾಣ, ಒಂದು ಉತ್ಪನ್ನ" ಮಳಿಗೆಗೆ ವಿಡಿಯೋ ವರ್ಚುಯಲ್ ಮೂಲಕ ಚಾಲನೆ ನೀಡಿದರು. ಸ್ಥಳೀಯ ಮಾರುಕಟ್ಟೆಯ ಉತ್ಪನ್ನಗಳಿಗೆ ಉತ್ತೇಜನ ನೀಡಲು ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿನ 'ಒಂದು ನಿಲ್ದಾಣ, ಒಂದು ಉತ್ಪನ್ನ' ಸ್ಟಾಲ್, ಟ್ರಾಲಿಗಳ ಲೋಕಾರ್ಪಣೆಗೊಳಿಸಿದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ರೈಲ್ವೇ ಇಲಾಖೆಯ ಸುಮಾರು 85 ಸಾವಿರ ಕೋಟಿ ರೂ. ಅಧಿಕ ಮೊತ್ತದ ವಿವಿಧ ರೈಲ್ವೆ ಯೋಜನೆಗಳ ಶಂಕುಸ್ಥಾಪನೆ, ಲೋಕಾರ್ಪಣೆ ಮಾಡಿದರು. ಇದೇ ಸಂದರ್ಭದಲ್ಲಿ 10 ವಂದೇ ಭಾರತ್ ಎಕ್ಸಪ್ರೆಸ್ ರೈಲು ಯೋಜನೆಗಳಿಗೆ ಚಾಲನೆ ನೀಡಿದರು.

ಬಳ್ಳಾರಿಯ ರೈಲ್ವೆ ನಿಲ್ದಾಣದಲ್ಲಿ ಆಯೋಜನೆ ಮಾಡಲಾಗಿದ್ದ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಬಿ.ಶ್ವೇತ ಅವರು ಭಾಗವಹಿಸಿದ್ದರು. (2 ನೇ ಪುಟಕ್ಕೆ)

## ಕವನ ಸಾಹಿತ್ಯಕ್ಕೆ ಶತಮಾನಗಳ ಇತಿಹಾಸವಿದೆ: ಶರಣೇಗೌಡ ಪೊಲೀಸ್ ಪಾಟೀಲ್

ಕೊಪ್ಪಳ ಮಾರ್ಚ್ 12 : ನಮ್ಮ ದೇಶ ಹಾಗೂ ರಾಜ್ಯದಲ್ಲಿ ಕವಿಗಳು ಹಾಗೂ ಕವನ ಸಾಹಿತ್ಯಕ್ಕೆ ಶತಮಾನಗಳ ಇತಿಹಾಸ 'ವಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಕೊಪ್ಪಳ ಜಿಲ್ಲಾಧ್ಯಕ್ಷರಾದ ಶರಣೇಗೌಡ ಪೊಲೀಸ್ ಪಾಟೀಲ್ ಅವರು ಹೇಳಿದರು. ಆನೆಗೊಂದಿ ಉತ್ಸವ–2024ರ ಪ್ರಯುಕ್ತ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಹಾಗೂ ಕೊಪ್ಪಳ ಜಿಲ್ಲಾಡಳಿತದ ಸಹಯೋಗದಲ್ಲಿ ಆನೆಗೊಂದಿಯ ಗಗನ್ ಮಹಲ್ ಹತ್ತಿರದ ಶಬರಿ ವೇದಿಕೆಯಲ್ಲಿ ಮಾರ್ಚ್ 12 ರಂದು ಏರ್ಪಡಿಸ'ಲಾದ ಕವಿಗೊಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು .ಆನೆಗೊಂದಿ ಉತ್ಸವ 'ದಂತಹ ಎಲ್ಲಾ ಕಾರ್ಯಕ್ರಮಗಳಲ್ಲಿ ಈ ನಾಡಿನ ಎಲ್ಲಾ ಕವಿಗಳು ಹಾಗೂ ಸಾಹಿತಿಗಳಿಗೆ ಅವಕಾಶ ಸಿಗಬೇಕು. ಹೊಸ ಕವಿಗಳು, ಉದಯನ್ಮೂಕ ಕವಿಗಳಿಗೆ ಹಾಗೂ ಅವಕಾಶ ವಂಚಿತ ಕವಿಗಳಿಗೆ ಇಂತಹ ವೇದಿಕೆ ಗಳಲ್ಲಿ ಅವಕಾಶ ಸಿಗುವುದರಿಂದ ಹೊಸ–ಹೊಸ ಕವಿತೆಗಳು ಹೊರಬರಲು ಸಾಧ್ಯವಾಗುತ್ತದೆ. ಕವಿಗಳು ತಮ್ಮ ಕವಿತೆಯ ಮೂಲಕ ಸಮಾಜವನ್ನು ಕಟ್ಟುವ ಕೆಲಸ ಆಗಬೇಕು. ಕವನಗಳ ಮೂಲಕ ಜನರ ಸಮಸ್ಯೆಗಳಿಗೆ ಸ್ಪಂಧಿಸಬೇಕು. ನಮ್ಮ ಕವಿತೆಗಳು ಈ ನಾಡಿಗೆ ಬೆಳಕನ್ನು ನೀಡಲಿ ಎಂದು ಹೇಳಿದರು. ಕಸಾಪ ಗಂಗಾವತಿ ತಾಲ್ಲೂಕು ಅಧ್ಯಕ್ಷರಾದ ಶ್ರೀನವಾಸ ಅಂಗಡಿ ಅವರು ಮಾತನಾಡಿ, ಈ ಕವಿಗೋಷ್ಠಿಯಲ್ಲಿ 81ಕ್ಕೂ ಹೆಚ್ಚು ಕವಿಗಳು ಹಾಗೂ ಸಾಹಿತಿಗಳು ಭಾಗವ ಹಿಸಿದ್ದು, ಅತ್ಯಂತ ವಿಶೇಷವಾಗಿದೆ. ಇಷ್ಟು ಸಂಖ್ಯೆಯಲ್ಲಿ ಕವಿಗಳು ಹಾಗೂ ಸಾಹಿತಿಗಳು ಪಾಲ್ಗೊಂಡಿದ್ದು, ಜಿಲ್ಲೆಯ ಮೊದಲ ಕವಿಗೋಷ್ಠಿ ಇದಾಗಿದೆ. ಎಲ್ಲಾ ಕವಿಗಳು ವಾಚನ ಮಾಡುವ ಕವನಗಳು ಸೇರಿದಂತೆ ಪುಸ್ತಕ ಬಿಡುಗಡೆ ಮಾಡುವಂತೆ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರಿಗೆ ಪ್ರಸ್ತಾಪಿಸಲಾಗಿದೆ ಎಂದು ಹೇಳಿದರು. ಕವಿಗೋಷ್ಠಿಯಲ್ಲಿ ಸಾಹಿತಿಗಳಾದ ಲಿಂಗಾರೆಡ್ಡಿ ಆಲೂರು ಅವರು ಅಧ್ಯಕ್ಷತೆ ವಹಿಸಿದ್ದರು. ಸಾಹಿತಿಗಳಾದ ಡಾ.ದೇವೇಂದ್ರಪ್ಪ ಜಾಜಿ ಅವರು ಆಶಯ ನುಡಿಗಳನ್ನಾಡಿದರು. ಮುಖ್ಯ ಅಥಿತಿಗಳಾಗಿ ಸಾಹಿತಿಗಳಾದ ರವೀಂದ್ರಸಾ ಬಾಕಳೆ, ಡಾ.ಲಿಂಗಣ್ಣ ಜಂಗಮರಹಳ್ಳಿ ರಮೇಶ್ ಗಬ್ಬೂರ್, ಹನುಮೇಶ್ ಗುಮಗೇರಿ, ರಾಘವೇಂದ್ರ ದಂಡಿನ್, ಜಿಲ್ಲಾ ಕಸಾಪ ಕಾರ್ಯದರ್ಶಿಗಳಾದ ಚನ್ನಬಸಪ್ಪ ಕಡ್ಡಿಪುಡಿ ಹಾಗೂ ಶೇಖರಗೌಡ ಪೊಲೀಸ್ ಪಾಟೀಲ್, ಕನಕಗಿರಿ ಕಸಾಪ ತಾಲ್ಲೂಕು ಅಧ್ಯಕ್ಷರಾದ ಮೆಹಬೂಬ್, ಕಾರಟಗಿ ಕಸಾಪ ತಾಲ್ಲೂಕು ಅಧ್ಯಕ್ಷರಾದ ಶರಣಪ್ಪ ಕೋಟ್ಯಾಳ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಗಂಗಾವತಿ ಘಟಕದ ಕಾರ್ಯದರ್ಶಿ ಗಳಾದ ಎಂ.ಉಮೇಶ್ ಉಪಸ್ಥಿತರಿದ್ದರು. ಗಮನ ಸೆಳೆದ ಮಕ್ಕಳು ಕವನ ವಾಚನ: ಕವಿಗೋಷ್ಠಿಗಾಗಿ ಸುಮಾರು 90 ಕವಿಗಳು ನೋಂದಣಿ ಮಾಡಿಕೊಂಡಿದ್ದು, ಈ ಪೈಕಿ 80 ಕ್ಕೂ ಹೆಚ್ಚು ಜನರು ಭಾಗವಹಿಸಿ, ತಮ್ಮ ಕವನಗಳನ್ನು ವಾಚನ ಮಾಡಿದರು. ಕುಂಟೋಜಿ, ಸಿದ್ದಾಪುರ ಸೇರಿದಂತೆ ವಿವಿಧ ಶಾಲಾ ವಿದ್ಯಾರ್ಥಿಗಳಾದ ಹಸಿನಾ ಬೇಗಂ, ರಾಜಮಾ, ಗುರುಲಿಂಗಯ್ಯ, ವಿಕ್ರಮ, ಅಮೃತಾ, ಅನುಷಾ, ವಿರೇಶ ಈ ಎಲ್ಲಾ ಮಕ್ಕಳು ಕವಿಗೋಷ್ಠಿಯಲ್ಲಿ ಪಾಲ್ಗೊಂಡು ಶಾಲೆ ಬಿಟ್ಟ ಮಕ್ಕಳು ಮರಳಿ ಶಾಲೆಗೆ ಬರುವುದು ಹಾಗೂ ತಾಯಿಯ ಮಮತೆ, ಸ್ನೇಹ ಮತ್ತು ತಮ್ಮ ಶಾಲೆಯ ಕುರಿತು ಕವನ ವಾಚನ ಮಾಡುವ ಮೂಲಕ ಎಲ್ಲರ ಗಮನ ಸೆಳೆದರು.

### ಮುಂಡರಗಿ ಗ್ಯಾರಂಟಿ ಫಲಾನುಭವಿಗಳ ಸಮಾವೇಶ ಉದ್ಘಾಟಿಸಿದ ಸಚಿವ ಎಚ್. ಕೆ. ಪಾಟೀಲ

# ಗ್ಯಾರಂಟಿ ಯೋಜನೆಯ ಮೂಲಕ ರಾಜ್ಯದಲ್ಲಿ ಬದಲಾವಣೆ ಪರ್ವ

ಗದಗ ಮಾರ್ಚ 12: ಪಂಚ ಗ್ಯಾರಂಟಿ ಯೋಜನೆಗಳ ಮೂಲಕ 1 ಕೋಟಿ 10 ಲಕ್ಷ ಜನರನ್ನು ಬಡತನ ರೇಖೆಯಿಂದ ಮೇಲೇತ್ತುವ ಮೂಲಕ ಕ್ರಾಂತಿಕಾರಕ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ ಹೇಳಿದರು.

ಮುಂಡರಗಿ ತಾಲೂಕ ಆಡಳಿತದಿಂದ ಮಂಗಳವಾರದಂದು ಡಂಬಳ ತೋಂಟದಾರ್ಯ ಮಠದಲ್ಲಿ ಜರುಗಿದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದ ಅವರು ಸಮಾವೇಶದಲ್ಲಿ ದೊಡ್ಡ ಮಟ್ಟದಲ್ಲಿ ಮಹಿಳೆಯರು ಸೇರಿದ್ದು ಸಂತಸ ತಂದಿದೆ. ಸರ್ಕಾರದ ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಶಕ್ತಿ ಬಂದಿದ್ದು. ಮಹಿಳೆಯರಲ್ಲಿ ಮನೆ ನಡೆಸಿಕೊಂಡು ಹೋಗುವ ಆತ್ಮವಿಶ್ವಾಸ ಮೂಡಿದ್ದು ಗ್ಯಾರಂಟಿ ಯೋಜನೆಯಿಂದ ಎಂದರು.

ಗ್ಯಾರಂಟಿ ಯೋಜನೆಯಿಂದ ಸರ್ಕಾರವು ದಿವಾಳಿ ಆಗುತ್ತದೆ ಎಂದು ಹಲವರು ಬೊಬ್ಬೆ ಹೊಡೆದರು. ಲೋಕಸಭಾ ಚುನಾವಣೆ ನಡೆದ ತಕ್ಷಣ ಗ್ಯಾರಂಟಿ ನಿಲ್ಲುತ್ತೆ ಎಂದು ಸುಳ್ಳು ಸುದ್ದಿ ಬಿತ್ತುತ್ತಾರೆ. ಅದಕ್ಕೆ ಗಮನ ನೀಡಬಾರದು. ಹಾಗೂ ಗ್ಯಾರಂಟಿ ಯೋಜನೆಗೆ ಬೇಕಾದ ಅನುದಾನವನ್ನು



ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ನಲ್ಲಿ ಮೀಸಲಿಟ್ಟಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವುದರ ಮೂಲಕ ಜಿಲ್ಲೆ ಉತ್ತಮ ಸ್ಥಾನದಲ್ಲಿದೆ. ಮುಂಡರಗಿ ತಾಲ್ಲೂಕಿನಲ್ಲಿ ಅನ್ನಬಾಗ್ಯ ಯೋಜನೆಯೂ ಪ್ರತಿಶತ 98, ಗೃಹ ಲಕ್ಷ್ಮಿ 97, ಜ್ಯೋತಿ 100, ಯುವನಿಧಿ ನೋದಾಯಿತರೆಲ್ಲರಿಗೂ ಜಾರಿಮಾಡಲಾಗಿದೆ, ಶಕ್ತಿ ಯೋಜನೆ ಮೂಲಕ ಜೂನ್ ನಿಂದ ಈವರೆಗೆ 49.60 ಲಕ್ಷ ಮಹಿಳೆಯರು ಪ್ರಯಾಣ ಮಾಡಿ ಗ್ಯಾರಂಟಿ ಯೋಜನೆಯ ಸದುಯೋಗ ಪಡೆದುಕೊಂಡಿದ್ದಾರೆ. ಎಂದರು.

ಗದಗ ಜಿಲ್ಲೆಯಲ್ಲಿ ಅನ್ನ ಬಾಗ್ಯ ಯೋಜನೆಯನ್ನು ಪ್ರತಿಶತ 93, ಗೃಹ ಲಕ್ಷ್ಮೀ 99, ಗೃಹಜ್ಯೋತಿ 100, ಶಕ್ತಿ ಯೋಜನೆ ಮೂಲಕ 3.78 ಕೋಟಿ ಮಹಿಳೆಯರು ಪ್ರಯಾಣ ಮಾಡಿದ್ದಾರೆ. ಈ ಪ್ರಮಾಣದಲ್ಲಿ ಯೋಜನೆಗಳ ಲಾಭ ನೇರವಾಗಿ ತಲುಪಿದೆ. ರಾಷ್ಟ್ರದಲ್ಲೇ ಗ್ಯಾರಂಟಿ ಯೊಜನೆಗಳು ಬಡವರ ಬಾಳಲ್ಲಿ ಆರ್ಥಿಕ ಅಭಿವೃದ್ಧಿ ಜೊತೆಗೆ ಕ್ರಾಂತಿಕಾರಿ ಬದಲಾವಣೆ ತಂದಿದೆ. ಯೊಜನೆಗಳ ಅನುಷ್ಠಾನ ದಲ್ಲಿ ಸಂಪೂರ್ಣವಾಗಿ ಸೋರಿಕೆ ತಡೆದು, ಭ್ರಷ್ಟಾಚಾರ ರಹಿತವಾಗಿ ನೇರವಾಗಿ ಅರ್ಹರಿಗೆ ತಲುಪಿಸಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರ ಎಂದರು.

ವಿಧಾನ ಸಭಾ ಚುನಾವಣೆ ವೇಳೆ ಗ್ಯಾರಂಟಿ ಕಾರ್ಡಗಳನ್ನು ಪ್ರತಿ ಮನೆ ಮನೆಗೆ ತಲುಪಿಸಿದ್ದೆವು. ಅದೇ ತರ ಸರ್ಕಾರ ರಚನೆಯಾದ ಮೇಲೆ ಯೋಜನೆಗಳ ಲಾಭ ಮನೆ ಮನೆಗೆ ತಲುಪಿಸಿದ್ದೇವೆ. ನುಡಿದಂತೆ ನಡೆಯುವ ಮೂಲಕ ಜನರ ವಿಶ್ವಾಸ ಉಳಿಸಿಕೊಂಡಿದ್ದೇವೆ ಎಂದು ಹೇಳಿದರು.ಶಾಸಕ ಜಿ.ಎಸ್. ಪಾಟೀಲ ಅವರು ಸಹ ಗ್ಯಾರಂಟಿ ಅನುಷ್ಠಾನ ಮಾಡುವಲ್ಲಿ ಮುತುವರ್ಜಿಯಿಂದ ಕಾರ್ಯ ನಿರ್ವಹಿಸಿ ಗ್ಯಾರಂಟಿ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸಿದ್ದಾರೆ. ಆಡಳಿತ ವ್ಯವಸ್ಥೆಯಲ್ಲಿ ಆಮೂಲಾಗ್ರ ಬದಲಾವಣೆಯನ್ನು ತಂದಿದೆ. ಜಾಲವಾಡಿಗಿ ಏತ ನೀರಾವರಿಗೆ ಚಾಲನೆ ನೀಡಲಾಗಿದೆ ಎಂದು ಸಚಿವ ಡಾ.ಎಚ್.ಕೆ.ಪಾಟೀಲ ತಿಳಿಸಿದರು. ರಾಜ್ಯದ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ ಅವರು ಸಮಾವೇಶದ ಅಧ್ಯಕ್ಷತೆ (2 ನೇ ಪುಟಕ್ಕೆ)